ಪೀಣ್ಯಾ ಕೈಗಾರಿಕಾ ಪ್ರದೇಶಕ್ಕೆ ಪ್ರತ್ಯೇಕವಾದ ಟೌನ್‌ಷಿಪ್ ಸ್ಥಾನಮಾನ ನೀಡುವ ಬಗ್ಗೆ

279 (546): ಶ್ರೀ ಸುರೇಶ್ ಕುಮಾರ್ ಎಸ್. (ರಾಜಾಜಿನಗರ) ಮಾನ್ಯ ಕಾರ್ಮಿಕ, ಸಣ್ಣ ಪ್ರಮಾಣದ ಕೈಗಾರಿಕೆ ಮತ್ತು ಹಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಪೀಣ್ಯ ಕೈಗಾರಿಕಾ ಪ್ರದೇಶಕ್ಕೆ ಪ್ರತ್ಯೇಕವಾದ ಟೌನ್‌ಷಿಪ್ ಸ್ಥಾನಮಾನ ನೀಡುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೆ?

ಆ) ಹಾಗಿದ್ದಲ್ಲಿ ಇದರಿಂದ ಈ ಪ್ರದೇಶಕ್ಕೆ ಆಗುವ ಅನುಕೂಲಗಳೇನು?

ಶ್ರೀ ಖಮರುಲ್ ಇಸ್ಲಾಂ (ಕಾರ್ಮಿಕ, ಸಣ್ಣ ಪ್ರಮಾಣದ ಕೈಗಾರಿಕೆ ಮತ್ತು ಹಜ್ ಸಚಿವರು):

ಅ) ಹೌದು.

ಆ) ಟೌನ್‌ಷಿಪ್‌ಗಳನ್ನು ಸ್ಥಾಪಿಸುವುದರಿಂದ ಆ ಪ್ರದೇಶದಲ್ಲಿ ಸ್ಥಾಪಿತವಾಗಿರುವ ಹಾಗೂ ಸ್ಥಾಪಿತಗೊಳ್ಳುವ ಕೈಗಾರಿಕೆಗಳ ಆರೋಗ್ಯಕರ ಬೆಳವಣಿಗೆ ಹಾಗೂ ಅಭಿವೃದ್ಧಿಗೆ ಸಹಕಾರಿಯಾಗುತ್ತದೆ. ಕೈಗಾರಿಕಾ ನಗರ ಪ್ರಾಧಿಕಾರಗಳನ್ನು (Industrial Township Authorities)ಗಳನ್ನು ಆ ಪ್ರದೇಶದ ಕೈಗಾರಿಕೋದ್ಯಮಿಗಳಿಂದಲೇ ಆಯ್ಕೆಗೊಂಡ ಪ್ರತಿನಿಧಿಗಳು ನಡೆಸುವುದರಿಂದ ಅಲ್ಲಿನ ಸಮಸ್ಯೆಗಳನ್ನು ತ್ವರಿತವಾಗಿ ವಿಲೇವಾರಿ ಮಾಡಲು ಸಾಧ್ಯವಾಗುತ್ತದೆ. ಕರ್ನಾಟಕ ಮುನಿಸಿಪಾಲಿಟಿ ಆಕ್ಟ್ 1964ಕ್ಕೆ ತಿದ್ದುಪಡಿ ತಂದಿರುವುದರಿಂದ, ತಿದ್ದುಪಡಿ ಆದೇಶದ ಪ್ರಕಾರ ಕೈಗಾರಿಕಾ ನಗರ ಪ್ರಾಧಿಕಾರಗಳಿಗೂ ಸಹ ನಗರಸಭೆ, ಪುರಸಭೆಗಳಿಗೆ ಇರುವ ಅಧಿಕಾರ ವ್ಯಾಪ್ತಿ ಸಂಪೂರ್ಣವಾಗಿ ಹಸ್ತಾಂತರವಾಗುತ್ತದೆ. ಇದರಿಂದ ಆ ಪ್ರದೇಶಗಳಡಿ ಬರುವ ಭೂಮಿ, ಕಟ್ಟಡದ ಸೇತುವೆ, ಇತರೆ ಮೂಲಭೂತ ಸೌಕರ್ಯಗಳಿಗೆ ಸಂಬಂಧಪಟ್ಟಂತೆ ಎಲ್ಲಾ ತೆರಿಗೆಗಳನ್ನು ವಸೂಲಿ ಮಾಡುವ ಹಾಗೂ ಆ ಪ್ರದೇಶವನ್ನು ಅಭಿವೃದ್ಧಿಪಡಿಸುವ ಸಂಪೂರ್ಣ ಅಧಿಕಾರ ಈ ಕೈಗಾರಿಕಾ ನಗರ ಪ್ರಾಧಿಕಾರಕ್ಕೆ ಇರುತ್ತದೆ. ಈ ಅಥಾರಿಟಿಗೆ ಕರ್ನಾಟಕ ಮುನಿಸಿಪಾಲಿಟಿ ಕಾಯಿದೆಯನ್ವಯ ಮುನಿಸಿಪಲ್ ಕೌನ್ಸಿಲ್‌ಗೆ ಇರುವ ಅಧಿಕಾರವೆಲ್ಲವೂ ಇರುತ್ತದೆ. ಸಂಗ್ರಹಿಸಿದ ಆಸ್ತಿ ತೆರಿಗೆಯು ಶೆ. 30 ರಷ್ಟನ್ನು ಸ್ಥಳೀಯ ಪ್ರಾಧಿಕಾರಗಳಿಗೆ ನೀಡಿ ಉಳಿದಿರುವುದನ್ನು ಆಯಾ ಪ್ರದೇಶದ ಅಭಿವೃದ್ಧಿಗೆ ಬೇಕಾಗುವಂತೆ ಪ್ರಾಶಸ್ತ್ಯಕ್ಕನುಗುಣವಾಗಿ ವಿನಿಯೋಗಿಸಬಹುದಾಗಿದೆ.

ರಾಜ್ಯದಲ್ಲಿರುವ ಸಣ್ಣ ಕೈಗಾರಿಕೆಗಳಿಗೆ ಸರ್ಕಾರದಿಂದ ಬಾಕಿ ಇರುವ ಸಬ್ಸಿಡಿ

280 (547): ಶ್ರೀ ಸುರೇಶ್ ಕುಮಾರ್ ಎಸ್. (ರಾಜಾಜಿನಗರ) ಮಾನ್ಯ ಕಾರ್ಮಿಕ, ಸಣ್ಣ ಪ್ರಮಾಣದ ಕೈಗಾರಿಕೆ ಮತ್ತು ಹಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಸಣ್ಣ ಕೈಗಾರಿಕೆಗಳಿಗೆ ಸರ್ಕಾರದಿಂದ ಬಾಕಿ ಇರುವ ಸಬ್ಸಿಡಿ ಹಣದ ಮೊತ್ತವೆಷ್ಟು;

ಆ) ಇದು ಎಂದಿನಿಂದ ಬಾಕಿ ಇದೆ;

ಇ) ಇದನ್ನು ಯಾವಾಗ ನೀಡಲಾಗುವುದು?

ಶ್ರೀ ಖಮರುಲ್ ಇಸ್ಲಾಂ (ಕಾರ್ಮಿಕ, ಸಣ್ಣ ಪ್ರಮಾಣದ ಕೈಗಾರಿಕೆ ಮತ್ತು ಹಜ್ ಸಚಿವರು)

ಅ) 31.03.2003ರ ವರೆಗೆ 18,279 ಸಣ್ಣ ಕೈಗಾರಿಕೆಗಳಿಗೆ ಒಟ್ಟು ರೂ. 40567.36 ಲಕ್ಷಗಳ ಸಹಾಯಧನ ಬಿಡುಗಡೆ ಬಾಕಿ ಇರುತ್ತದೆ.